ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1812
ಸದಸ್ಯರ ಹೆಸರು	:	ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	24.03.2020
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಿಗೆ ಈಗಾಗಲೇ ಚುನಾವಣೆ ನಡೆದು 4 ತಿಂಗಳು ಕಳೆದಿದ್ದರೂ ಸಹ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಹುದ್ದೆಗಳಿಗೆ ಮೀಸಲಾತಿ ಪ್ರಕಟಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಕಟಿಸದೇ ಇರುವುದಕ್ಕೆ ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ 9ನೇ ಅವಧಿಗೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಮೀಸಲಾತಿಯನ್ನು ಸಂಖ್ಯೆ:ನಅಇ 82 ಎಂಎಲ್‌ಆರ್ **2018(1)**(2)(3), ದಿನಾಂಕ:03.09.2018ರಲ್ಲಿ ನಿಗದಿಪಡಿಸಿ ಅಧಿಸೂಚನೆ ಹೊರಡಿಸಲಾಗಿತ್ತು. ಈ ಮೀಸಲಾತಿ ಅಧಿಸೂಚನೆಗಳನ್ನು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು/ ಧಾರವಾಡ/ಕಲಬುರ್ಗಿ ಇಲ್ಲಿ ಪ್ರಶ್ನಿಸಿದ್ದು, ಧಾರವಾಡ ಪೀಠವು ರಿಟ್ ಅರ್ಜಿ ಸಂಖ್ಯೆ:105750-754/2018 ಹಾಗೂ ಇತರೇ ಪ್ರಕರಣಗಳಲ್ಲಿ ದಿನಾಂಕ: **10.09.2018**ರಂದು ತಡೆಯಾಜ್ಞೆ ನೀಡಲಾಗಿತ್ತು. ಮುಂದುವರೆದು, ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ:**47171/2018 c/w** ಇತರೇ ಪ್ರಕರಣಗಳಲ್ಲಿ ನ್ಯಾಯಾಲಯವು ದಿನಾಂಕ: 18.01.2019ರಂದು ನೀಡಲಾದ ತೀರ್ಪಿನಲ್ಲಿ ರಿಟ್ ಅರ್ಜಿಯನ್ನು ವಜಾಗೊಳಿಸಿರುತ್ತದೆ. ಸದರಿ ತೀರ್ಪನ್ನು ಪ್ರಶ್ನಿಸಿ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ:157-176/2019 c/w ಇತರೇ ಪ್ರಕರಣಗಳನ್ನು ದಾಖಲಿಸಿದ್ದು, ಸದರಿ ಪ್ರಕರಣವು ಅಂತಿಮವಾಗಿ
ಆ)	ಮೀಸಲಾತಿ ಪ್ರಕಟಿಸದೇ ಇರುವುದರಿಂದ ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿಗಳಲ್ಲಿ ಚುನಾಯಿತ ರಾದ ಜನಪ್ರತಿನಿಧಿಗಳ ಹಕ್ಕನ್ನು ಮೊಟಕುಗೊಳಿಸಿದಂತಾಗುವುದಿಲ್ಲವೇ;	

		ದಿನಾಂಕ : 07.11.2019ರಂದು ವಿಚಾರಣೆಗೆ ಬಂದು ಸರ್ಕಾರದ ಪರ ಹಾಜರಾದ ಅಡ್ವೋಕೇಟ್ ಜನರಲ್‌ರವರು ದಿನಾಂಕಃ 03.09.2018ರಂದು ಹೊರಡಿಸಲಾದ ಅಧಿಸೂಚನೆಗಳನ್ನು ಹಿಂಪಡೆದು ಹೊಸದಾಗಿ ಮಾರ್ಗಸೂಚಿಗಳನ್ನು ಅನುಸರಿಸಿ ಒಂದು ತಿಂಗಳೊಳಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸಿ ಅಧಿಸೂಚನೆ ಹೊರಡಿಸಲಾಗುವುದೆಂದು ಹೇಳಿಕೆಯನ್ನು ಸಲ್ಲಿಸಿದ್ದು, ಈ ಹೇಳಿಕೆಯನ್ನು ಪರಿಗಣಿಸಿ ಮಾನ್ಯ ಉಚ್ಚ ನ್ಯಾಯಾಲಯವು ಪ್ರಕರಣವನ್ನು ವಿಲೇವಾರಿ ಮಾಡಿರುತ್ತದೆ. ರಿಟ್ ಅಪೀಲು ಸಂಖ್ಯೆ:157–176/2019 c/w ಇತರೇ ಪ್ರಕರಣಗಳಲ್ಲಿ ದಿನಾಂಕಃ07.11.2019ರಂದು ಮಾನ್ಯ ನ್ಯಾಯಾಲಯವು ಅಡ್ವೋಕೇಟ್ ಜನರಲ್‌ರವರ ಹೇಳಿಕೆಯನ್ನು ಪರಿಗಣಿಸಿ ಪ್ರಕರಣವನ್ನು ಇತ್ಯರ್ಥಗೊಳಿಸಿದ್ದು, ಆ ಪ್ರಕಾರ ದಿನಾಂಕಃ03.09.2018ರ ಅಧಿಸೂಚನೆಯನ್ನು ದಿನಾಂಕಃ 06.02.2020ರಂದು ಹಿಂಪಡೆಯಲಾಗಿದೆ. ಈ ಮಧ್ಯೆ, ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ:2356/2020ರ ಪ್ರಕರಣದಲ್ಲಿ ಅರ್ಜಿದಾರರು ದಿನಾಂಕಃ03.09.2018ರ ಅಧಿಸೂಚನೆಯನ್ವಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಚುನಾವಣೆ ನಡೆಸಲು ನಿರ್ದೇಶನ ನೀಡುವಂತೆ ನ್ಯಾಯಾಲಯ ದಲ್ಲಿ ದಾವೆ ಹೂಡಿರುತ್ತಾರೆ. ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕಃ26.02.2020ರಂದು ವಿಚಾರಣೆ ನಡೆಸಿ, ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಮಾರ್ಗಸೂಚಿಗಳನ್ನು ಅನುಸರಿಸಿ ಹೊಸದಾಗಿ ಮೀಸಲಾತಿ ಅಧಿಸೂಚನೆಗಳನ್ನು ಹೊರಡಿಸಲು ಕೈಗೊಂಡಿರುವ ಕ್ರಮದ ಬಗ್ಗೆ ದಾಖಲೆಗಳನ್ನು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸುವಂತೆ, ಅಲ್ಲಿಯವರೆಗೆ ಮೀಸಲಾತಿ ಅಧಿಸೂಚನೆಗಳನ್ನು ಹೊರಡಿಸ ಬಾರದೆಂದು ನ್ಯಾಯಾಲಯವು ನಿರ್ದೇಶನ ನೀಡಿ,

		ದಿನಾಂಕಃ 10.03.2020ಕ್ಕೆ ಮುಂದೂಡಿತ್ತು. ಪ್ರಕರಣವು ದಿನಾಂಕಃ 10.03.2020ರಂದು ವಿಚಾರಣೆಗೆ ಬಂದು ವಿಚಾರಣೆ ನಡೆಸಿದ ನ್ಯಾಯಾಲಯವು ಮೀಸಲಾತಿ ಅಧಿಸೂಚನೆಗಳನ್ನು ಹೊರಡಿಸಲು ನಿರ್ದೇಶನ ನೀಡಿ ಪ್ರಕರಣವನ್ನು ಇತ್ಯರ್ಥಗೊಳಿಸಿರುತ್ತದೆ.
ಇ)	ಹಾಗಿದ್ದಲ್ಲಿ, ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಹುದ್ದೆಗಳಿಗೆ ಮೀಸಲಾತಿಯನ್ನು ಎಷ್ಟು ದಿನಗಳಲ್ಲಿ ಪ್ರಕಟಿಸಲಾಗುವುದು ?	ಸರ್ಕಾರದ ಅಧಿಸೂಚನೆ ಸಂಖ್ಯೆ ನಅಇ 39 ಎಂಎಲ್‌ಆರ್ 2019(1)(2)(3), ದಿನಾಂಕ 11.03.2020ರಲ್ಲಿ 58 ನಗರಸಭೆ, 117 ಪುರಸಭೆ ಮತ್ತು 93 ಪಟ್ಟಣ ಪಂಚಾಯತಿಗಳಿಗೆ (9ನೇ ಅವಧಿಗೆ) ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಸದರಿ ಅಧಿಸೂಚನೆಗಳನ್ನು ರಾಜ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ 5999/2020 c/w ಇತರೇ ಪ್ರಕರಣಗಳನ್ನು ದಾಖಲಿಸಿ ಪ್ರಶ್ನಿಸಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ 17.03.2020ರಂದು ವಿಚಾರಣೆ ನಡೆಸಿ, ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನಗಳನ್ನು ಮುಂದಿನ ಆದೇಶದವರೆಗೆ ಭರ್ತಿ ಮಾಡದಂತೆ ಪ್ರತಿವಾದಿಗಳಿಗೆ ನಿರ್ದೇಶನ ನೀಡಿ ಪ್ರಕರಣವನ್ನು ದಿನಾಂಕ 01.04.2020ಕ್ಕೆ ಮುಂದೂಡಿರುತ್ತದೆ.

ಸಂಖ್ಯೆ: ನಅಇ 21 ಎಲ್‌ಸಿಕ್ಯೂ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ
ಮತ್ತು ರೇಷ್ಮೆ ಸಚಿವರು